I.No. 808
-5 JAN 2023

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಉತ್ತರ ಕನ್ನಡ ಜಿಲ್ಲೆಯ 03 ವಕ್ಫ್ ಸ್ವತ್ತುಗಳ ಸಂರಕ್ಷಣೆಗಾಗಿ ಕಾಂಪೌಂಡ್ ಗೋಡೆ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:MWD 155 WES 2011(P) ದಿನಾಂಕ:28.04.2011.
2. ಸರ್ಕಾರಿ ಆದೇಶ ಸಂಖ್ಯೆ: **MWD 33 WES 2022**, ದಿನಾಂಕ: 11.04.2022, 28.06.2022 & 31-10-2022.

<><><><>

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ-(1) ರಲ್ಲಿನ ಸರ್ಕಾರದ ಆದೇಶ ದಿನಾಂಕ:28-04-2011 ರಲ್ಲಿ ಕರ್ನಾಟಕ ರಾಜ್ಯದ ವಕ್ಫ್ ಆಸ್ತಿಗಳಾದ ಖಬರಸ್ಥಾನ್, ಈದ್ಗಾದ ಜಾಗಗಳನ್ನು ಅಕ್ರಮ ಒತ್ತುವರಿ, ಅನಧಿಕೃತ ಸ್ವಾಧೀನ ಮತ್ತು ವಿವಾದಗಳಿಂದ ಉದ್ಭವಿಸುತ್ತಿರುವ ಸಮಸ್ಯೆಗಳನ್ನು ತಡೆಯಲು ಆಸ್ತಿಗಳ ಸುತ್ತ ಬೇಲಿ, ಗೋಡೆಯನ್ನು ಹಾಕುವುದು ಅವಶ್ಯಕವಾಗಿರುತ್ತದೆ. ಅದನ್ನು ಸಂರಕ್ಷಣೆ ಮಾಡುವ ಯೋಜನೆಯಡಿ ಕೆಲವು ನಿಬಂಧನೆಗಳನ್ನು ರೂಪಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ-(2) ರಲ್ಲಿನ ಆದೇಶಗಳಲ್ಲಿ ವಕ್ಫ್ ಸ್ವತ್ತಿನ ಸಂರಕ್ಷಣೆಗಾಗಿ 2022-23ನೇ ಸಾಲಿಗೆ ಲೆಕ್ಕಶೀರ್ಷಿಕೆ: 2225-04-102-0-03(059) ರಡಿಯಲ್ಲಿ ಸರ್ಕಾರವು ರೂ.1200.00 ಲಕ್ಷಗಳ ಅನುದಾನವನ್ನು ನಿಗದಿಪಡಿಸಿದ್ದು, ಮೊದಲನೇ, ಎರಡನೇ ಹಾಗೂ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಮಂಜೂರು ಮಾಡಲಾಗಿರುತ್ತದೆ.

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ವಿಧಾನಸಭಾ ಕ್ಷೇತ್ರದ ವಕ್ಫ್ ಸಂಸ್ಥೆಗಳ ಸಂರಕ್ಷಣೆಗಾಗಿ ಕಾಂಪೌಂಡ್ ಗೋಡೆ ನಿರ್ಮಾಣ ಮಾಡಲು ಅನುದಾನವನ್ನು ಬಿಡುಗಡೆ ಮಾಡುವ ಕುರಿತು ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಅನುದಾನ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿರುವುದರಿಂದ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 23 WGA 2022, ಬೆಂಗಳೂರು, ದಿನಾಂಕ: 04.01.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23ನೇ ಅನುದಾನದಲ್ಲಿ ರಾಜ್ಯದ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ವಿಧಾನಸಭಾ ಕ್ಷೇತ್ರದ 03 ವಕ್ಫ್ ಸ್ವತ್ತುಗಳ ಸಂರಕ್ಷಣೆಗಾಗಿ ಕಾಂಪೌಂಡ್ ಗೋಡೆ ನಿರ್ಮಿಸಲು ಒಟ್ಟು ರೂ.12.00 ಲಕ್ಷಗಳ (ಹನ್ನೆರಡು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಮಂಜೂರು ಮಾಡಿದ್ದು, ಅನುಬಂಧದಲ್ಲಿ ಆಯಾ ಸಂಸ್ಥೆಗಳ ಎದುರಿಗೆ ಸೂಚಿಸಲಾಗಿರುವ ಪ್ರತ್ಯೇಕ ಮೊತ್ತವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಮಂಜೂರು ಮಾಡಿ ಆದೇಶಿಸಿದೆ.

**ಷರತ್ತುಗಳು:**

1. 2022-23 ನೇ ಸಾಲಿನ ಲೆಕ್ಕಶೀರ್ಷಿಕೆ:2225-04-102-0-03(059) ರಡಿಯಲ್ಲಿ ವಕ್ಫ್ ಸ್ವತ್ತುಗಳ ಸಂರಕ್ಷಣೆಗಾಗಿ (ಯೋಜನೆ) ಸಹಾಯಾನುದಾನ ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದು.

......2

2. ಮೇಲೆ ಓದಲಾದ (1) ರ ಆದೇಶದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು ಗ್ರಾಂಟ್-ಇನ್-ಏಡ್ ನಲ್ಲಿರುವ ಸೂಚನೆಗಳನ್ನು ವಕ್ಫ್ ಸಂಸ್ಥೆಗಳಿಗೆ ಹಣ ಬಿಡುಗಡೆಗೊಳಿಸುವ ಮುನ್ನ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ಮೊದಲನೇ ಕಂತಿನ ಅನುದಾನ ರೂ.5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಬಳಕೆ ಪ್ರಮಾಣ ಪತ್ರವನ್ನು ಪಡೆದ ನಂತರ ಅನುದಾನ ಬಿಡುಗಡೆ ಮಾಡತಕ್ಕದ್ದು.
4. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮತ್ತು ಜಿಲ್ಲಾ ವಕ್ಫ್ ಸಲಹಾ ಸಮಿತಿಯವರು ಆದೇಶ ಹೊರಡಿಸಿದ ಎರಡು ತಿಂಗಳೊಳಗಾಗಿ ಸದರಿ ಎಲ್ಲಾ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡತಕ್ಕದ್ದು.
5. ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆಗೊಳಿಸದೆಯೋ ಅದೇ ಉದ್ದೇಶಕ್ಕಾಗಿ ಬಳಸತಕ್ಕದ್ದು.
6. ಸದರಿ ಅನುದಾನವನ್ನು 2022-23 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಿರುವ ಅನುದಾನದಲ್ಲಿ ಈಗಾಗಲೇ ಮಂಜೂರು ಮಾಡಿ ಬಿಡುಗಡೆಗೆ ಬಾಕಿ ಇರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ: 04.04.2022 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Mukhtar Pasha H.G
(ಮುಕ್ತಾರ್ ಪಾಷ ಹೆಚ್.ಜಿ.) 4/11/2022
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ.

ಇವರಿಗೆ:
1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.
3. ಮುಖ್ಯಕಾರ್ಯನಿರ್ವಹಣಾಧಿಕಾರಿ,ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು. **(ಮುಂದಿನ ಸೂಕ್ತ ಕ್ರಮಕಾಗಿ)**
4. ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ಜಿಲ್ಲಾ ವಕ್ಫ್ ಸಲಹಾ ಸಮಿತಿ, ಉತ್ತರ ಕನ್ನಡ ಜಿಲ್ಲೆ.
7. ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ ಕೇಂದ್ರ,(24X7) ವಸಂತನಗರ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

## ಸರ್ಕಾರದ ಆದೇಶ ಸಂಖ್ಯೆ: MWD 23 WGA 2022,

### ಬೆಂಗಳೂರು, ದಿನಾಂಕ: 04.01.2023 ಕ್ಕೆ ಅನುಬಂಧ (ಕಾಂಪೌಂಡ್ ಗೋಡೆ ನಿರ್ಮಾಣ)

| ಕ್ರಮ ಸಂಖ್ಯೆ | ಸಂಸ್ಥೆಯ ಹೆಸರು | ಉದ್ದೇಶಿತ ಕಾಮಗಾರಿ | ಮಂಜೂರು ಮಾಡಿರುವ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| **1. ಬೆಳಗಾವಿ ಜಿಲ್ಲೆ** | | | |
| 1 | ಹಳಿಯಾಳ ತಾಲ್ಲೂಕಿನ ಹಳಿಯಾಳ ಪಟ್ಟಣದ ಗುತ್ತಿಗೇರಿಯಲ್ಲಿರುವ ಜಮಾತುಲ್ ಮುಸ್ಲಿಮಿನ್, ಗುತ್ತಿಗೇರಿ, ಮೊಹಲ್ಲಾ ಕಂಪೌಂಡ್ ಗೋಡೆ ನಿರ್ಮಾಣ | ಕಾಂಪೌಂಡ್ ನಿರ್ಮಾಣ | 5.00 |
| 2 | ಹಳಿಯಾಳ ತಾಲ್ಲೂಕಿನ ಜೋಗನಕೊಪ್ಪ ಜುಮ್ಮಾ ಮಸ್ಜೀದ್‌ನ ಖಬರಸ್ಥಾನಕ್ಕೆ ಕಾಂಪೌಂಡ ಗೋಡೆ ನಿರ್ಮಾಣ. | ಕಾಂಪೌಂಡ್ ನಿರ್ಮಾಣ | 3.00 |
| 3 | ಡಾಂಡೇಲಿ ತಾಲ್ಲೂಕಿನ ಹಾಳಮಡ್ಡಿಯಲ್ಲಿರುವ ಅಮೀನ ಮಸ್ಜೀದ್ ಮತ್ತು ಮದರಸಾಕ್ಕೆ ಕಾಂಪೌಂಡ್ ಗೋಡೆ ನಿರ್ಮಾಣ. | ಕಾಂಪೌಂಡ್ ನಿರ್ಮಾಣ | 4.00 |
| | | ಒಟ್ಟು | 12.00 |

(ಹನ್ನೆರಡು ಲಕ್ಷ ರೂಪಾಯಿಗಳು ಮಾತ್ರ)

14-1
4/1/2023

(ಮುಕ್ತಾರ್ ಪಾಷ ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ